**All India Radio: Bangalore**
**National Bulletin In Kannada**
**23.07.2025 19.35 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**23.07.2025 19.35 p.m.**
**<><><><>**

**ಮುಖ್ಯಾಂಶಗಳು**

- **ಮೂರನೇ ದಿನವು ಮುಂದುವರಿದ ವಿಪಕ್ಷಗಳ ಗದ್ದಲ ; ಉಭಯ ಸದನಗಳ ಕಲಾಪ ನಾಳೆಗೆ ಮುಂದೂಡಿಕೆ**

- **ದೇಶದಲ್ಲಿ ಬಲಿಷ್ಠ ಮಾಹಿತಿ ತಂತ್ರಜ್ಞಾನ ವ್ಯವಸ್ಥೆಯಿಂದಾಗಿ ೬ ದಶಲಕ್ಷ ಜನರಿಗೆ ಉದ್ಯೋಗಾವಕಾಶ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್**

- **ದೇಶಾದ್ಯಂತ ೪೯ ದಶಲಕ್ಷ ಮನೆಗಳಿಗೆ ಡಿಡಿ ಉಚಿತ ಡಿಶ್**

- **ಟೆಸ್ಟ್ ಕ್ರಿಕೆಟ್ : ಇಂಗ್ಲೆಂಡ್ ವಿರುದ್ಧ ಟಾಸ್ ಸೋತು ಮೊದಲ ಇನ್ನಿಂಗ್ಸ್ ಆರಂಭಿಸಿರುವ ಭಾರತ**

<><><><>

ಪ್ರತಿಪಕ್ಷಗಳು ತಮ್ಮ ಪ್ರತಿಭಟನೆಯನ್ನು ಮುಂದುವರಿಸಿದ್ದರಿಂದ ಸಂಸತ್ತಿನ ಉಭಯ ಸದನಗಳ ಕಲಾಪಗಳು ಸತತ ಮೂರನೇ ದಿನವೂ ಸುಗಮವಾಗಿ ನಡೆಯಲಿಲ್ಲ. ಬಿಹಾರದಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಮತ್ತು ಇತರೆ ವಿಷಯಗಳ ಕುರಿತು ಚರ್ಚೆಗೆ ವಿರೋಧ ಪಕ್ಷಗಳು ಒತ್ತಾಯಿಸುತ್ತಿದವು. ವಿಪಕ್ಷಗಳ ಗದ್ದಲದ ಹಿನ್ನೆಲೆಯಲ್ಲಿ ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಕಲಾಪವನ್ನು ನಾಳೆಗೆ ಮುಂದೂಡಲಾಯಿತು. ಇಂದು ಬೆಳಗ್ಗೆ ನಿಗದಿತ ಸಮಯಕ್ಕೆ ಲೋಕಸಭೆ ಸಮಾವೇಶಗೊಂಡಾಗ ಸಭಾಧ್ಯಕ್ಷ ಓಂ ಬಿರ್ಲಾ, ಪ್ರಶ್ನೋತ್ತರ ಕಲಾಪವನ್ನು ಕೈಗೆತ್ತಿಕೊಂಡರು.

ಆಗ ವಿಪಕ್ಷ ಸದಸ್ಯರು, ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕುರಿತು ಚರ್ಚೆಗೆ ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು. ಆಗ ಸಭಾಧ್ಯಕ್ಷರು ಆಕ್ಷೇಪ ವ್ಯಕ್ತಪಡಿಸಿ, ಮೊದಲು ಪ್ರಶ್ನೋತ್ತರ ಕಲಾಪ ನಡೆಸಲು ಅವಕಾಶ ಕಲ್ಪಿಸಬೇಕು. ದೇಶದ ಜನ ಸದನದ ಕಾರ್ಯಕಲಾಪವನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ. ಸದನದಲ್ಲಿ ಭಿತ್ತಿ ಚಿತ್ರಗಳನ್ನು ಪ್ರದರ್ಶಿಸಿ, ಘೋಷಣೆ ಕೂಗುವುದು ತರವಲ್ಲ ಎಂದರು. ವಿಪಕ್ಷ ಸದಸ್ಯರು ಘೋಷಣೆ ಕೂಗುವುದನ್ನು ತೀವ್ರಗೊಳಿಸಿದಾಗ ಸಭಾಧ್ಯಕ್ಷರು ಕಲಾಪವನ್ನು ಮಧ್ಯಾಹ್ನ ೧೨ ಗಂಟೆಗೆ ನಂತರ ಪುನಃ ೨ ಗಂಟೆಗೆ ಮುಂದೂಡಿದರು. ೨ ಗಂಟೆಗೆ ಸದನ ಮತ್ತೆ ಸೇರಿದಾಗಲೂ ವಿಪಕ್ಷಗಳ ಗದ್ದಲ ಮುಂದುವರಿದಿದ್ದರಿಂದ ಕಲಾಪವನ್ನು ನಾಳೆಗೆ ಮುಂದೂಡಲಾಯಿತು. ರಾಜ್ಯಸಭೆಯಲ್ಲೂ ಇದೇ ವಿಷಯಕ್ಕೆ ಸಂಬಂಧಿಸಿದಂತೆ ಚರ್ಚೆಗೆ ಒತ್ತಾಯಿಸಿದಾಗ, ಉಪಸಭಾಪತಿ ಹರಿವಂಶ್ ಅವರು, ಈ ಬೇಡಿಕೆಯನ್ನು ತಿರಸ್ಕರಿಸಿದರು. ಕಾಂಗ್ರೆಸ್, ಟಿಎಂಸಿ, ಡಿಎಂಕೆ ಮತ್ತಿತರ ಪಕ್ಷಗಳು ಸದನದಲ್ಲಿ ಗದ್ದಲವೆಬ್ಬಿಸಿದವು. ಆಗ ಕಲಾಪವನ್ನು ಮಧ್ಯಾಹ್ನ ೧೨ಗಂಟೆಗೆ ಮುಂದೂಡಿದರು. ನಂತರ ಸದನ ಮತ್ತೆ ಸೇರಿದಾಗಲೂ ಗಲಾಟೆ ಮುಂದುವರೆಯಿತು. ಆಗ ಕಲಾಪವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಲಾಯಿತು. ಆದರೆ ಪುನಃ ೨ ಗಂಟೆಗೆ ಸದನ ಮತ್ತೆ ಸೇರಿದಾಗಲೂ ವಿಪಕ್ಷಗಳ ಗದ್ದಲ ಮುಂದುವರಿದಿದ್ದರಿಂದ ಕಲಾಪವನ್ನು ನಾಳೆಗೆ ಮುಂದೂಡಲಾಯಿತು.

<><><><>

ಪ್ರತಿವರ್ಷ ೨೫೦ ಶತಕೋಟಿ ಡಾಲರ್‌ಗೂ ಅಧಿಕ ಆದಾಯ ಸೃಜಿಸುವ ಹಾಗೂ ೬ ದಶಲಕ್ಷ ಜನರಿಗೆ ಉದ್ಯೋಗ ಒದಗಿಸುವ ಬಲಿಷ್ಠ ಮಾಹಿತಿ ತಂತ್ರಜ್ಞಾನ ಪರಿಸರ ವ್ಯವಸ್ಥೆಯನ್ನು ಭಾರತ ಹೊಂದಿದೆ ಎಂದು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ಸ್ಟ್ಯಾನ್‌ಫೋರ್ಡ್ ಎಐ ಶ್ರೇಣೀಕರಣ, ಭಾರತವನ್ನು ಕೃತಕ ಬುದ್ಧಿಮತ್ತೆ ಕೌಶಲ್ಯಗಳು, ಸಾಮರ್ಥ್ಯಗಳು ಮತ್ತು ನೀತಿಗಳಲ್ಲಿ ವಿಶ್ವದ ಮುಂಚೂಣಿ ರಾಷ್ಟ್ರಗಳ ಸಾಲಿನಲ್ಲಿರಿಸಿದೆ ಎಂದರು. ತಂತ್ರಜ್ಞಾನವನ್ನು ಎಲ್ಲರ ಕೈಗೆಟುಕುವಂತೆ ಮಾಡುವ ಪ್ರಧಾನಿ ನರೇಂದ್ರ ಮೋದಿ ಅವರ ದೃಷ್ಟಿಕೋನದ ಆಧಾರದ ಮೇಲೆ ಭಾರತದ ಕೃತಕ ಬುದ್ಧಿಮತ್ತೆ ಕಾರ್ಯತಂತ್ರ ಯೋಜನೆ ರೂಪುಗೊಂಡಿದ್ದು, ಇದು ಭಾರತ-ಕೇಂದ್ರಿತ ಸವಾಲುಗಳನ್ನು ಪರಿಹರಿಸುವ ಗುರಿ ಹೊಂದಿದೆ. ಈ

ಮೂಲಕ ಭಾರತೀಯರೆಲ್ಲರಿಗೂ ಆರ್ಥಿಕ ಮತ್ತು ಔದ್ಯೋಗಿಕ ಅವಕಾಶಗಳನ್ನು ಸೃಜಿಸುವ ಉದ್ದೇಶವಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದರು.

<><><><>

೨೦೨೪ರ ಹೊತ್ತಿಗೆ ದೇಶಾದ್ಯಂತ ಡಿಡಿ ಉಚಿತ ಡಿಶ್ ಸುಮಾರು ೪೯ ದಶಲಕ್ಷ ಮನೆಗಳನ್ನು ತಲುಪಿದೆ. ೨೦೧೮ ರಲ್ಲಿ ಈ ಸಂಖ್ಯೆ ೩೩ ದಶಲಕ್ಷ ಇತ್ತು. ಇದು ಪ್ರೇಕ್ಷಕರ ಸಕಾರಾತ್ಮಕ ಬೆಳವಣಿಗೆಯನ್ನು ಸೂಚಿಸುತ್ತದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್.ಮುರುಗನ್ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ಡಿಡಿ ಉಚಿತ ಡಿಶ್, ಪ್ರಸಾರ ಭಾರತಿಯ ಉಚಿತ ಡಿಟಿಎಚ್ ವೇದಿಕೆಯಾಗಿದೆ. ಇದು ಇಡೀ ದೇಶವನ್ನು ವ್ಯಾಪಿಸಿದೆ. ಸರ್ಕಾರದ ಪ್ರಮುಖ ಯೋಜನೆಗಳು ಮತ್ತು ಸಾರ್ವಜನಿಕ ಜಾಗೃತಿ ಅಭಿಯಾನಗಳನ್ನು ಡಿಡಿ ಉಚಿತ ಡಿಶ್‌ನಲ್ಲಿ ದೂರದರ್ಶನದ ವಿವಿಧ ರಾಷ್ಟ್ರೀಯ ಮತ್ತು ಪ್ರಾದೇಶಿಕ ಚಾನೆಲ್‌ಗಳ ಕಾರ್ಯಕ್ರಮಗಳ ಮೂಲಕ ಪ್ರಸಾರ ಮಾಡಲಾಗುತ್ತಿದೆ ಎಂದು ವಿವರಿಸಿದರು. ಡಿಡಿ ಉಚಿತ ಡಿಶ್‌ನಲ್ಲಿ ದಕ್ಷಿಣ ಭಾರತೀಯ ಭಾಷೆಗಳ ಚಾನೆಲ್‌ಗಳ ಪ್ರಾತಿನಿಧ್ಯವನ್ನು ಹೆಚ್ಚಿಸಲು ಕೇಂದ್ರ ಸರ್ಕಾರ ವಿವಿಧ ಕ್ರಮಗಳನ್ನು ಕೈಗೊಂಡಿದೆ. ಡಿಡಿ ಉಚಿತ ಡಿಶ್ ಪ್ಲಾಟ್‌ಫಾರ್ಮ್‌ನ ಇ-ಹರಾಜಿನಲ್ಲಿ ದಕ್ಷಿಣ ಭಾರತೀಯ ಭಾಷೆಗಳ ಚಾನೆಲ್‌ಗಳಿಗೆ ಸ್ಲಾಟ್‌ಗಳನ್ನು ಕಾಯ್ದಿರಿಸಲಾಗಿದೆ. ಅಲ್ಲದೇ, ಇತ್ತೀಚಿನ ಇ-ಹರಾಜಿನಲ್ಲಿ ತಮಿಳು, ತೆಲುಗು, ಕನ್ನಡ ಮತ್ತು ಮಲಯಾಳಂ ಚಾನೆಲ್‌ಗಳಿಗೆ ಮೀಸಲಾದ ಸ್ಲಾಟ್‌ಗಳನ್ನು ನೀಡಲಾಗಿದೆ ಎಂದು ಅವರು ಮಾಹಿತಿ ನೀಡಿದರು. ದಕ್ಷಿಣ ಭಾರತೀಯ ಭಾಷೆಗಳ ಖಾಸಗಿ ಚಾನೆಲ್‌ಗಳಾದ ಟಿವಿ೯ ತೆಲುಗು, ಆಸ್ತಾ ಕನ್ನಡ ಮತ್ತು ಆಸ್ತಾ ತೆಲುಗು, ಡಿಡಿ ಉಚಿತ ಡಿಶ್‌ನಲ್ಲಿ ಪ್ರಸಾರವಾಗುತ್ತಿದೆ. ಡಿಡಿ ತಮಿಳು, ಡಿಡಿ ಸಪ್ತಗಿರಿ, ಡಿಡಿ ಚಂದನ, ಡಿಡಿ ಯಾದಗಿರಿ ಮತ್ತು ಡಿಡಿ ಮಲಯಾಳಂ ನಂತಹ ದೂರದರ್ಶನದ ಸ್ವಂತ ಪ್ರಾದೇಶಿಕ ಚಾನೆಲ್‌ಗಳು ಸಹ ಪ್ರಸಾರವಾಗುತ್ತಿದೆ. ಈ ಚಾನೆಲ್‌ಗಳನ್ನು ತಾಂತ್ರಿಕವಾಗಿ ನವೀಕರಿಸಲಾಗುತ್ತಿದೆ ಎಂದು ಸಚಿವ ಡಾ. ಎಲ್.ಮುರುಗನ್ ಹೇಳಿದರು.

<><><><>

ವೈದ್ಯಕೀಯ ತುರ್ತು ಪರಿಸ್ಥಿತಿಯನ್ನು ನಿಭಾಯಿಸಲು ಕಳೆದ ೩ ವರ್ಷಗಳಲ್ಲಿ ೧೬ ಲಕ್ಷಕ್ಕೂ ಅಧಿಕ ರೈಲ್ವೆ ಉದ್ಯೋಗಿಗಳಿಗೆ ತರಬೇತಿ ನೀಡಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್,

ಎಲ್ಲ ರೈಲು ನಿಲ್ದಾಣಗಳು ಮತ್ತು ಪ್ರಯಾಣಿಕ ರೈಲುಗಳಲ್ಲಿ ವೈದ್ಯಕೀಯ ಪೆಟ್ಟಿಗೆ ಇರಿಸುವಂತೆ ಸೂಚಿಸಲಾಗಿದೆ. ಈ ವೈದ್ಯಕೀಯ ಪೆಟ್ಟಿಗೆಯಲ್ಲಿ ಅಗತ್ಯ ಔಷಧಗಳು, ಅಗತ್ಯ ವೈದ್ಯಕೀಯ ಸಲಕರಣೆಗಳು ಇರಿಸುವ ಜೊತೆಗೆ ಆಮ್ಲಜನಕ ಸಿಲಿಂಡರ್ ಲಭ್ಯವಾಗುವಂತೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು. ವೈದ್ಯಕೀಯ ತುರ್ತು ಸಂದರ್ಭಗಳಲ್ಲಿ ರೈಲ್ವೆ, ರಾಜ್ಯ ಸರ್ಕಾರ ಮತ್ತು ಖಾಸಗಿ ಆಸ್ಪತ್ರೆಗಳ ಆಂಬುಲೆನ್ಸ್ ಸೇವೆಗಳನ್ನು ಗಾಯಾಳುಗಳು ಮತ್ತು ಅನಾರೋಗ್ಯ ಪೀಡಿತ ಪ್ರಯಾಣಿಕರನ್ನು ಸ್ಥಳಾಂತರಿಸಲು ಬಳಸಿಕೊಳ್ಳಲಾಗುತ್ತದೆ. ಎಲ್ಲ ರೈಲು ನಿಲ್ದಾಣಗಳಲ್ಲಿ ದೂರವಾಣಿ ಸಂಪರ್ಕ ಸಂಖ್ಯೆಗಳೊಂದಿಗೆ ಸ್ಥಳೀಯ ಆಸ್ಪತ್ರೆಗಳು ಮತ್ತು ವೈದ್ಯರ ಪಟ್ಟಿ ಲಭ್ಯವಿದೆ ಎಂದು ಸಚಿವರು ವಿವರಿಸಿದರು.

<><><>

ಸಮುದ್ರದ ಮೂಲಕ ಸರಕು ಸಾಗಾಟ ವಿಧೇಯಕ ೨೦೨೫ ಅನ್ನು ರಾಜ್ಯಸಭೆಯಲ್ಲಿಂದು ಕೇಂದ್ರ ಬಂದರು, ಹಡಗು ಮತ್ತು ಜಲ ಸಾರಿಗೆ ಸಚಿವ ಸರ್ಬಾನಂದಾ ಸೋನೊವಾಲ್ ಮಂಡಿಸಿದರು. ಈ ವಿಧೇಯಕವು ಸಮುದ್ರದ ಮೂಲಕ ಭಾರತೀಯ ಸರಕು ಸಾಗಾಟ ಕಾಯ್ದೆ ೧೯೨೫ ಅನ್ನು ಬದಲಿಸುವ ಉದ್ದೇಶ ಹೊಂದಿದೆ. ಬಂದರುಗಳಿಂದ ಸರಕು ಸಾಗಾಣೆ ಸಂದರ್ಭದಲ್ಲಿ ಜವಾಬ್ದಾರಿ, ಹೊಣೆಗಾರಿಕೆ, ಹಕ್ಕುಗಳನ್ನು ಈ ಕಾಯ್ದೆ ಒಳಗೊಂಡಿದೆ. ವಿಧೇಯಕದ ನಿಬಂಧನೆಗಳನ್ನು ಕಾರ್ಯಗತಗೊಳಿಸಲು ನಿರ್ದೇಶನಗಳನ್ನು ನೀಡಲು ಮತ್ತು ಸರಕು ಸಾಗಣೆ ವಿಧೇಯಕಗಳಿಗೆ ಅನ್ವಯವಾಗುವ ನಿಯಮಗಳನ್ನು ನಿರ್ದಿಷ್ಟಪಡಿಸುವ ವೇಳಾಪಟ್ಟಿಯನ್ನು ತಿದ್ದುಪಡಿ ಮಾಡಲು ಶಾಸನವು ಕೇಂದ್ರ ಸರ್ಕಾರಕ್ಕೆ ಅಧಿಕಾರ ನೀಡುತ್ತದೆ. ಸರಕು ಸಾಗಣೆ ವಿಧೇಯಕವು ಸಾಗಿಸಲ್ಪಡುವ ಸರಕುಗಳ ಪ್ರಕಾರ, ಪ್ರಮಾಣ, ಸ್ಥಿತಿ ಮತ್ತು ಗಮ್ಯಸ್ಥಾನದಂತಹ ವಿವರಗಳನ್ನು ಒಳಗೊಂಡಿದೆ. ವಿಧೇಯಕವನ್ನು ಈಗಾಗಲೇ ಲೋಕಸಭೆಯು ಅಂಗೀಕರಿಸಿದೆ.

<><><>

ಬ್ರಿಟನ್ ಹಾಗೂ ಮಾಲ್ದೀವ್ಸ್‌ಗೆ ಅಧಿಕೃತ ಪ್ರವಾಸ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಪ್ರಯಾಣ ಆರಂಭಿಸಿದ್ದಾರೆ. ದೆಹಲಿಯಿಂದ ಇಂದು ಮಧ್ಯಾಹ್ನ ಲಂಡನ್‌ಗೆ ತೆರಳಿದ್ದಾರೆ. ತಮ್ಮ ಭೇಟಿಯ ಮೊದಲ ಚರಣದಲ್ಲಿ ಪ್ರಧಾನಿ, ಬ್ರಿಟನ್‌ಗೆ ಭೇಟಿ ನೀಡಲಿದ್ದು, ಅಲ್ಲಿನ ಪ್ರಧಾನಿ ಕೀರ್ ಸ್ಟಾರ್ಮರ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ. ಬ್ರಿಟನ್ ದೊರೆ ಮೂರನೇ ಚಾರ್ಲ್ಸ್ ಅವರನ್ನು ಭೇಟಿ ಮಾಡಲಿದ್ದಾರೆ. ಈ ಕುರಿತು ಮಾಹಿತಿ ನೀಡಿದ ವಿದೇಶಾಂಗ ಕಾರ್ಯದರ್ಶಿ

ವಿಕ್ರಮ್ ಮಿಸ್ರಿ, ಪ್ರಧಾನಿ ನರೇಂದ್ರ ಮೋದಿ ಅವರು ಬ್ರಿಟನ್ ಮತ್ತು ಭಾರತದ ಉದ್ಯಮ ನಾಯಕರೊಂದಿಗೆ ಸಂವಾದ ನಡೆಸಲಿದ್ದಾರೆ. ಬ್ರಿಟನ್‌ಗೆ ಪ್ರಧಾನಿ ಕೈಗೊಳ್ಳುತ್ತಿರುವ ನಾಲ್ಕನೇ ಭೇಟಿ ಇದಾಗಿದೆ ಎಂದು ಹೇಳಿದರು.  ತಮ್ಮ ಪ್ರವಾಸದ ಎರಡನೇ ಚರಣದಲ್ಲಿ ಪ್ರಧಾನಿ, ಇದೇ ೨೫ ರಿಂದ ಮಾಲ್ದೀವ್ಸ್‌ಗೆ ಭೇಟಿ ನೀಡಲಿದ್ದಾರೆ. ಮಾಲ್ದೀವ್ಸ್ ಅಧ್ಯಕ್ಷ ಮೊಹಮ್ಮದ್ ಮುಯಿಝು ಅವರ ಆಹ್ವಾನ ಮೇರಿಗೆ ಇದೇ ೨೬ರಂದು ನಡೆಯಲಿರುವ ಮಾಲ್ದೀವ್ಸ್‌ನ ೬೦ನೇ ಸ್ವಾತಂತ್ರ್ಯೋತ್ಸವ ವರ್ಷಾಚರಣೆಯಲ್ಲಿ ಗೌರವ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಭೇಟಿಯ ವೇಳೆ ಪ್ರಧಾನಿ, ಅಧ್ಯಕ್ಷ ಮುಯಿಝು ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದು, ವಿವಿಧ ಮೂಲಸೌಕರ್ಯ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ ಎಂದು ವಿಕ್ರಮ್ ಮಿಸ್ರಿ ತಿಳಿಸಿದ್ದಾರೆ.

<><><><>

ಇಂಗ್ಲೆಂಡ್‌ನ ಮ್ಯಾಂಚೆಸ್ಟರ್‌ನ ಓಲ್ಡ್ ಟ್ರಾಫರ್ಡ್‌ನಲ್ಲಿ ನಡೆಯುತ್ತಿರುವ ಭಾರತ ಮತ್ತು ಇಂಗ್ಲೆಂಡ್ ನಡುವಿನ ನಾಲ್ಕನೇ ಟೆಸ್ಟ್ ಕ್ರಿಕೆಟ್ ಪಂದ್ಯದಲ್ಲಿ ಟಾಸ್ ಗೆದ್ದ ಇಂಗ್ಲೆಂಡ್ ಬೌಲಿಂಗ್ ಆಯ್ದುಕೊಂಡಿದೆ. ಮೊದಲು  ಬ್ಯಾಟಿಂಗ್ ಆರಂಭಿಸುವ ಭಾರತ, ಇತ್ತೀಚಿನ ವರದಿ ಬಂದಾಗ, ವಿಕೆಟ್ ನಷ್ಟಕ್ಕೆ  ೨ ರನ್ ಗಳಿಸಿ ಆಡುತ್ತಿದೆ.

<><><><>

ಚೀನಾದ ಚಾಂಗ್‌ಝೌನಲ್ಲಿ ನಡೆಯುತ್ತಿರುವ ಚೀನಾ ಓಪನ್ ಸೂಪರ್  ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಪಿ.ವಿ.ಸಿಂಧು, ಜಪಾನ್‌ನ ಟೊಮೊಕಾ ಮಿಯಜಾಕಿ ವಿರುದ್ಧ ಕಠಿಣ ಗೆಲುವು ಸಾಧಿಸಿ ಶುಭಾರಂಭ ಕಂಡಿದ್ದಾರೆ.  ಮಾಜಿ ವಿಶ್ವ ಚಾಂಪಿಯನ್ ಪಿ.ವಿ.ಸಿಂಧು, ೨೦೨೨ರ ವಿಶ್ವ ಜೂನಿಯರ್ ಚಾಂಪಿಯನ್ ಮಿಯಜಾಕಿ ವಿರುದ್ಧ ೨೧-೧೫, ೮-೨೧, ೨೧-೧೭ ಸೆಟ್‌ಗಳಿಂದ ಜಯ ಗಳಿಸಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>